ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಹೌದು

ಆ) ಪ್ರಸ್ತುತ ಸಾಲಿನಲ್ಲಿ ವೀರಭದ್ರೇಶ್ವರ ದೇವಾಲಯದ ಬಳಿ ರೂ 12 13 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ನಿರ್ಮಿಸಲು ಕಾರ್ಯಾದೇಶ ನೀಡಲಾಗಿದೆ

934 (402) ಶ್ರೀ ಪಾಟೀಲ್ ಎಸ್ ಎಸ್ (ಮುಂಡರಗಿ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) ಗದಗ ಜಿಲ್ಲೆ ಗದಗ ತಾಲ್ಲೂಕು ಲಕ್ಕುಂಡಿ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು,

ಆ) ಅದಕ್ಕೆ ಸರ್ಕಾರದಿಂದ ಎಷ್ಟು ಹಣಕಾಸು ನೆರವು ಒದಗಿಸಲಾಗಿದೆ?

ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಅ) ಲಕ್ಕುಂಡಿಯಲ್ಲಿ 8 86 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ನಿರ್ಮಿಸಲಾಗಿದ್ದು, ಈಗಾಗಲೆ ಪ್ರವಾಸಿಗರಿಗಾಗಿ ತೆರೆಯಲಾಗಿದೆ

ಆ) 40 00 ಲಕ್ಷ ರೂ ಗಳ ಅಂದಾಜು ವೆಚ್ಚದಲ್ಲಿ ಹೆದ್ದಾರಿ ಸೌಲಭ್ಯವನ್ನು ನಿರ್ಮಿಸಿದ್ದು ಕಾಮಗಾರಿ ಪೂರ್ಣಗೊಂಡಿರುತ್ತದೆ ಸದರಿ ಸೌಲಭ್ಯವನ್ನು ನಿರ್ವಹಣೆಗಾಗಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮಕ್ಕೆ ವಹಿಸಲು ಪರಿಶೀಲಿಸಲಾಗುತ್ತಿದೆ

ಇ) ಪ್ರಸ್ತುತ ಸಾಲಿನಲ್ಲಿ ಲಕ್ಕುಂಡಿಯಲ್ಲಿ 12 13 ಲಕ್ಷಗಳ ಅಂದಾಜು ವೆಚ್ಚದಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ನಿರ್ಮಿಸಲು ಕಾರ್ಯಾದೇಶ ನೀಡಲಾಗಿದೆ

ಈ) ಒಟ್ಟು 60 99 ಲಕ್ಷ ರೂಪಾಯಿಗಳನ್ನು ಮೇಲ್ಕಂಡ ಸೌಲಭ್ಯಗಳ ನಿರ್ಮಾಣಕ್ಕಾಗಿ ಒದಗಿಸಲಾಗಿದೆ

935 (403) ಶ್ರೀ ಪಾಟೀಲ್ ಎಸ್ ಎಸ್ (ಮುಂಡರಗಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ,

ಅ) ಯಶಸ್ವಿನಿ ಯೋಜನೆಯಲ್ಲಿ ನಹಾಯವಾದ ಫಲಾನುಭವಿಗಳು ಮತ್ತು ಖರ್ಚಾದ ಹಣ ಎಷ್ಟು, (ತಾಲ್ಲೂಕುವಾರು ವಿವರ ನೀಡುವುದು)

ಆ) ಯಶಸ್ವಿನಿ ಯೋಜನೆಯಲ್ಲಿ ಯಾವ ಯಾವ ರೋಗಗಳಿಗೆ ಚಿಕಿತ್ಸೆ ಇದೆ,